ಪ್ರ-72 (55)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಭಾರತಿ ಶೆಟ್ಟಿ ಇವರು ನಿಯಮ-72ರಡಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾಹಿತಿ ಒದಗಿಸುವ ಕುರಿತು:-**

ಪ್ರಶ್ನೆ:- ಸರ್ಕಾರದ ವಿವಿಧ ಇಲಾಖೆಗಳು (ಉದಾ: ಶಿಕ್ಷಣ, ವೈದ್ಯಕೀಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ) ತಮಗೆ ಅಗತ್ಯವಿರುವ ಬಟ್ಟೆಗಳನ್ನು ಮಾರುಕಟ್ಟೆಯಿಂದ ಖರೀದಿಸುವ ಬದಲು ಜವಳಿ ಮತ್ತು ವಿದ್ಯುತ್ ಕೈ ಮಗ್ಗಗಳ ನಿಗಮದಿಂದ ಖರೀದಿಸುವಂತೆ ಮಾನ್ಯ ಮಂತ್ರಿಗಳು ಸದರಿ ಇಲಾಖೆಗಳಿಗೆ ನಿರ್ದೇಶನ ನೀಡುವ ಮೂಲಕ ರಾಜ್ಯದ ನೇಕಾರರ ರಕ್ಷಣೆಗೆ ಸರ್ಕಾರ ಧಾವಿಸಬೇಕೆಂಬ ವಿಷಯದ ಬಗ್ಗೆ ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:- ಕೈಮಗ್ಗ ಮತ್ತು ಜವಳಿ ಇಲಾಖೆಯ ಅಧೀನದಲ್ಲಿ ಬರುವ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ ಮತ್ತು ಕರ್ನಾಟಕ ರಾಜ್ಯ ಸಹಕಾರ ಕೈಮಗ್ಗ ನೇಕಾರರ ಮಹಾಮಂಡಳ ನಿಯಮಿತ (ಕಾವೇರಿ ಹ್ಯಾಂಡ್ ಲೂಮ್ಸ್), ಈ ನಿಗಮ/ಮಂಡಳಿಗಳು ಅಲ್ಪ ಪ್ರಮಾಣದ ಸಮವಸ್ತ್ರ ಪೂರೈಕೆ ಮಾಡುತ್ತಿವೆ.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ವತಿಯಿಂದ ಶಿಕ್ಷಣ ಇಲಾಖೆಗೆ ವಿದ್ಯಾ ವಿಕಾಸ ಯೋಜನೆಯಡಿಯಲ್ಲಿ ಕಲಬುರ್ಗಿ ಮತ್ತು ಬೆಂಗಳೂರು ವಿಭಾಗಗಳ ಜಿಲ್ಲೆಗಳಿಗೆ ಪ್ರತಿ ವರ್ಷ ಸುಮಾರು 50 ಲಕ್ಷ ಮೀಟರ್ ಸಮವಸ್ತ್ರ ಬಟ್ಟೆಗಳನ್ನು ಸರಬರಾಜು ಮಾಡುವ ಸಂಬಂಧ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದೊಂದಿಗೆ 2018-19 ರಿಂದ 2020-21 ರ ಮೂರು ಶೈಕ್ಷಣಿಕ ವರ್ಷಗಳ ಅವಧಿಗೆ ಶಿಕ್ಷಣ ಇಲಾಖೆಯೊಂದಿಗೆ ಕರಾರನ್ನು ಮಾಡಿಕೊಂಡಿದ್ದು, ಈ ಕರಾರಿನನ್ವಯ ನಿಗಮವು ಶಿಕ್ಷಣ ಇಲಾಖೆಗೆ ಸಮವಸ್ತ್ರವನ್ನು ಸರಬರಾಜು ಮಾಡಿದ್ದು, ಸದರಿ ಕರಾರು 2020-21 ನೇ ಸಾಲಿಗೆ ಮುಕ್ತಾಯವಾಗಿದ್ದು, ಕರಾರು ನವೀಕರಣಗೊಳಿಸಲು ಶಿಕ್ಷಣ ಇಲಾಖೆಗೆ ಕೋರಿಕೆಯನ್ನು ಸಲ್ಲಿಸಲಾಗಿರುತ್ತದೆ. ಇದಲ್ಲದೇ, ನಿಗಮವು ಸರ್ಕಾರದಿಂದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ಇತರೆ ಇಲಾಖೆಗಳಿಗೆ ಬೇಕಾಗುವ ಜವಳಿ ಉತ್ಪನ್ನಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದ ನಿಯಮ 4(ಹೆಚ್) ರಡಿಯಲ್ಲಿ ಸರಬರಾಜು ಆದೇಶಗಳನ್ನು ಪಡೆದು ಸರಬರಾಜು ಮಾಡುತ್ತಿದೆ.

ಕರ್ನಾಟಕ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತದ ವ್ಯಾಪ್ತಿಯಲ್ಲಿ ವಿದ್ಯುತ್ ಮಗ್ಗಗಳು ಕಾರ್ಯನಿರ್ವಹಿಸುತ್ತಿದ್ದು, ಶಿಕ್ಷಣ ಇಲಾಖೆಯ ಮೂಲಕ ವಿದ್ಯಾ ವಿಕಾಸ ಯೋಜನೆಯಡಿ ಸರ್ಕಾರಿ ಶಾಲಾ ಮಕ್ಕಳಿಗೆ ಪೂರೈಸಲಾಗುತ್ತಿರುವ ಸಮವಸ್ತ್ರ ಬಟ್ಟೆಯನ್ನು ನಿಗಮದ ವತಿಯಿಂದ ಕಳೆದ 20 ವರ್ಷಗಳಿಂದ ಸರಬರಾಜು ಮಾಡಲಾಗುತ್ತಿದೆ.

ಕರ್ನಾಟಕ ರಾಜ್ಯ ಸಹಕಾರ ಕೈಮಗ್ಗ ನೇಕಾರರ ಮಹಾಮಂಡಳ ನಿಯಮಿತ (ಕಾವೇರಿ ಹ್ಯಾಂಡ್ ಲೂಮ್ಸ್), ಬೆಂಗಳೂರು ಈ ಸಂಸ್ಥೆಯು 2016-17 ನೇ ಸಾಲಿನಲ್ಲಿ ವಿದ್ಯಾವಿಕಾಸ ಯೋಜನೆಯಡಿಯಲ್ಲಿ ಶಿಕ್ಷಣ ಇಲಾಖೆಗೆ, ಕೆ.ಹೆಚ್.ಡಿ.ಸಿ ಮೂಲಕ 5 ಲಕ್ಷ ಮೀಟರ್ ಸಮವಸ್ತ್ರ ಬಟ್ಟೆ ಸರಬರಾಜು ಮಾಡಿರುತ್ತದೆ. ಅದೇ ರೀತಿ 2017-18 ನೇ ಸಾಲಿನಲ್ಲಿ 5 ಲಕ್ಷ ಮೀಟರ್ ಶರ್ಟಿಂಗ್ ಬಟ್ಟೆಗಳನ್ನು ಸರಬರಾಜು ಮಾಡಿರುತ್ತದೆ.

ಮಾನ್ಯ ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:16.06.2020 ರಂದು ನಡೆದ ಕೈಮಗ್ಗ ಮತ್ತು ಜವಳಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಇಲಾಖೆಯ ವ್ಯಾಪ್ತಿಯಲ್ಲಿರುವ ನಿಗಮ / ಮಂಡಳಿಗಳಿಂದ ಸರ್ಕಾರದ ವಿವಿಧ ಇಲಾಖೆಗಳಿಗೆ ಬೇಕಾಗುವ ಸಮವಸ್ತ್ರ, ಸೀರೆ ಇತ್ಯಾದಿಗಳನ್ನು ಮುಂದಿನ ಸಾಲಿನಿಂದ ಖರೀದಿಸುವ ಕುರಿತಂತೆ ಪರಿಶೀಲಿಸಲು ಮಾನ್ಯ ಮುಖ್ಯ ಮಂತ್ರಿಗಳು ಸೂಚಿಸಿರುತ್ತಾರೆ. ಈ ಕುರಿತು ಬೇರೆ ರಾಜ್ಯಗಳಲ್ಲಿರುವ ವ್ಯವಸ್ಥೆಯನ್ನು ಅಧ್ಯಯನ ಮಾಡಲು ಇಲಾಖಾಧಿಕಾರಿಗಳಿಗೆ ಸೂಚಿಸಲಾಗಿತ್ತು. ಅದರನ್ವಯ ಜವಳಿ ಅಭಿವೃದ್ಧಿ ಆಯುಕ್ತರ ನೇತೃತ್ವದ ಹಿರಿಯ ಅಧಿಕಾರಿಗಳ ತಂಡ ಜನವರಿ 2021 ರಲ್ಲಿ ತಮಿಳುನಾಡಿಗೆ ಭೇಟಿ ಕೊಟ್ಟು ಈ ವಿಷಯದ ಬಗ್ಗೆ ಅಲ್ಲಿನ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಅಧ್ಯಯನ ನಡೆಸಿರುತ್ತಾರೆ. ಸದರಿ ಅಧ್ಯಯನದ ವರದಿ ಬಂದ ನಂತರ ಸಾಧಕ – ಬಾಧಕಗಳ ಕುರಿತು ಪರಿಶೀಲಿಸಿ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಸಂಖ್ಯೆ: **CI 20 JAKE 2021**

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು